**ಕರ್ನಾಟಕ ಸರ್ಕಾರ**
**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ:ಕಾಶಿಇ/ವಿಯೋ/09/IITB/2017-18

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:22-08-2017.

## ಸುತ್ತೋಲೆ

ವಿಷಯ: 2017-18ನೇ ಸಾಲಿನಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ IIT ಮುಂಬೈನವರು ನಡೆಸುತ್ತಿರುವ Spoken Tutorials ಕಾರ್ಯಕ್ರಮದ ಅನುಷ್ಠಾನದ ಬಗ್ಗೆ.

ಉಲ್ಲೇಖ: ಈ ಕಛೇರಿಯ ಸಮ ಸಂಖ್ಯೆ ಸುತ್ತೋಲೆ ದಿನಾಂಕ:03-07-2017.

******

IIT, ಮುಂಬೈ NMICT ಅಂಗವಾಗಿ ನಡೆಸುತ್ತಿರುವ Spoken Tutorials ಕಾರ್ಯಕ್ರಮದ ಮೂಲಕ ವಿದ್ಯಾರ್ಥಿಗಳಿಗೆ ಕಂಪ್ಯೂಟರ್ ಮೂಲಭೂತ ಬಳಕೆ ಮತ್ತು ವಿವಿಧ ಉಪಯುಕ್ತ ಸಾಫ್ಟವೇರ್‌ಗಳಲ್ಲಿ ಉಚಿತವಾಗಿ ತರಬೇತಿ ನೀಡುತ್ತದೆ. ಸದರಿ ಕಾರ್ಯಕ್ರಮವನ್ನು ಉಲ್ಲೇಖದನ್ವಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕಡ್ಡಾಯವಾಗಿ ಅನುಷ್ಠಾನಗೊಳಿಸುವಂತೆ ಸುತ್ತೋಲೆ ಹೊರಡಿಸಲಾಗಿತ್ತು. ಈ ಹಿನ್ನೆಲೆಯಲ್ಲಿ Spoken Tutorials ಕಾರ್ಯಕ್ರಮದ ಅನುಷ್ಠಾನದ ಕುರಿತು ಸವಿವರವಾದ ವರದಿ ಮತ್ತು ಈ ಕಾರ್ಯಕ್ರಮಕ್ಕೆ ನೋಂದಾಯಿಸಿಕೊಂಡಿರುವ ವಿದ್ಯಾರ್ಥಿಗಳ ಅಂಕಿಅಂಶಗಳನ್ನು ಈ ಕೆಳಕಂಡ ನಮೂನೆಯಲ್ಲಿ ದಿನಾಂಕ:28-08-2017ರೊಳಗೆ ಇಲಾಖೆಗೆ ಪ್ರಾಂಶುಪಾಲರು ಮತ್ತು ಕಾರ್ಯಕ್ರಮದ ನೋಡಲ್ ಆಫೀಸರ್ ಅವರ ಸಹಿಯೊಡನೆ ಸಾಫ್ಟ್ ಪ್ರತಿಯಲ್ಲಿ ಇ-ಮೇಲ್ ವಿಳಾಸ:spokentutorial.dce@gmail.com ಮೂಲಕ ಕಳುಹಿಸಿಕೊಡುವಂತೆ ಸೂಚಿಸಲಾಗಿದೆ. ನೋಂದಾಯಿತ ವಿದ್ಯಾರ್ಥಿಗಳು ನಿಯಮಿತವಾಗಿ ಕಾರ್ಯಕ್ರಮದ ಪಠ್ಯವನ್ನು ಕಲಿಯುತ್ತಿದ್ದಾರೆ ಎನ್ನುವುದನ್ನು ಕಾಲೇಜಿನ ಹಂತದಲ್ಲಿ ಮೇಲ್ವಿಚಾರಣೆ ನಡೆಸಲಾಗುತ್ತಿದೆಯೇ ಎನ್ನುವ ಅಂಶವನ್ನು ಕಡ್ಡಾಯವಾಗಿ ವರದಿಯಲ್ಲಿ ಸೇರಿಸುವುದು.

## ನಮೂನೆ

ಕಾಲೇಜಿನ ಹೆಸರು:

ಪ್ರಾದೇಶಿಕ ಜಂಟಿ ನಿರ್ದೇಶಕರ ಕಛೇರಿ:

ಪ್ರಾಂಶುಪಾಲರ ಹೆಸರು ಮತ್ತು ಮೊಬೈಲ್ ಸಂಖ್ಯೆ:

ನೋಡಲ್ ಆಫೀಸರ್ ಹೆಸರು ಮತ್ತು ಮೊಬೈಲ್ ಸಂಖ್ಯೆ:

| ತರಗತಿ | ಪ್ರವೇಶಾತಿ ಪಡೆದಿರುವ ವಿದ್ಯಾರ್ಥಿಗಳ ಸಂಖ್ಯೆ | Spoken Tutorials ಗೆ ನೋಂದಾಯಿಸಿಕೊಂಡಿರುವ ವಿದ್ಯಾರ್ಥಿಗಳ ಸಂಖ್ಯೆ – **ಕೋರ್ಸ್‌ವಾರು** | Spoken Tutorials ಗೆ ನೋಂದಾಯಿಸಿಕೊಂಡಿರುವ ಒಟ್ಟು ವಿದ್ಯಾರ್ಥಿಗಳ ಸಂಖ್ಯೆ |
|---|---|---|---|
| I Degree | | | |
| II Degree | | | |
| III Degree | | | |
| Post Graduate | | | |

**(ನೋಡಲ್ ಆಫೀಸರ್ ಅವರ ಸಹಿ)** **(ಪ್ರಾಂಶುಪಾಲರ ಸಹಿ)**

ಕಾರ್ಯಕ್ರಮದ ಕುರಿತ ಹೆಚ್ಚಿನ ಮಾಹಿತಿಗಾಗಿ dharmadhikarianushree@gmail.com ಅನ್ನು ಸಂಪರ್ಕಿಸಬಹುದಾಗಿದೆ.

**(ಕರಡು ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ)**

**ಕಾಲೇಜು ಶಿಕ್ಷಣ ನಿರ್ದೇಶಕರು.**

**ಇವರಿಗೆ:**

ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಅಗತ್ಯ ಕ್ರಮಕ್ಕಾಗಿ.

**ಪ್ರತಿಯನ್ನು:**

1) ಜಂಟಿ ನಿರ್ದೇಶಕರು, ಪ್ರಾದೇಶಿಕ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಮಂಗಳೂರು, ಶಿವಮೊಗ್ಗ, ಧಾರವಾಡ ಮತ್ತು ಕಲುಬುರ್ಗಿ – ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ.
2) ಮಾಹಿತಿ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕಾಶಿಇ, ಬೆಂಗಳೂರು – ಇಲಾಖಾ ವೆಬ್ ಸೈಟಿನಲ್ಲಿ ಪ್ರಕಟಿಸಲು.
3) ಕಛೇರಿ ಪ್ರತಿ.